RNU AIR DHARWAD

# JULY 25, 2024

## AKASHAVANI - DHARWAD

## PRADESH SAMACHARA (KANNADA) 7:05 AM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- **ಸಂಪೂರ್ಣತಾ ಆಂದೋಲನ: ವಿಜಯಪುರ ಜಿಲ್ಲೆ ತಾಳಿಕೋಟೆಯಲ್ಲಿ, ಆರೋಗ್ಯ ಅಭಿಯಾನಕ್ಕೆ, ಚಾಲನೆ.**
- **ಕೇಂದ್ರದ ಅಮೃತ ಯೋಜನೆ; ಕರ್ನಾಟಕದ 59 ರೈಲು ನಿಲ್ದಾಣಗಳು, ಮೇಲ್ದರ್ಜೆಗೆ – ಅಶ್ವಿನಿ ವೈಷ್ಣವ್.**
- **ಕಾಫಿ; ವಾಣಿಜ್ಯೋದ್ಯಮದಿಂದ, ಕೃಷಿ ವ್ಯಾಪ್ತಿಗೆ ತರಲು ಚಿಂತನೆ – ದಿನೇಶ್ ಎಂ.ಜೆ.**
- **ಮುಂದುವರೆದ ಮಳೆ; ಮೈದುಂಬಿದ ನದಿಗಳು, ಸನ್ನದ್ಧ ಸ್ಥಿತಿಯಲ್ಲಿ ಕಾಳಜಿ ಕೇಂದ್ರಗಳು.**

<><><>

**ಈಗ ವಾರ್ತೆಗಳ ವಿವರ**

<><><>

**ವಿಜಯಪುರ ಜಿಲ್ಲೆ ತಾಳಿಕೋಟೆಯಲ್ಲಿ, ಕೇಂದ್ರ ನೀತಿ ಆಯೋಗ ಸಂಚಾಲಿತ, ಸಂಪೂರ್ಣತಾ ಅಭಿಯಾನದಡಿ, ಮಹಿಳೆಯರು, ತಾಯಂದಿರು, ಬಾಣಂತಿಯರು ಮತ್ತು ಗರ್ಭಿಣಿಯರ ಆರೋಗ್ಯ ಸುಧಾರಣೆಗೆ, ಸೂಚಿತ ಮಾನದಂಡಗಳ ಪ್ರಕಾರ, 90 ದಿನಗಳ ಆರೋಗ್ಯ ಅಭಿಯಾನ ಆಯೋಜಿಸಲಾಗಿದೆ. ತಾಲೂಕು ಆಡಳಿತದ ಸಹಕಾರದಲ್ಲಿ, ಮಕ್ಕಳಲ್ಲಿನ ಅಶಕ್ತತೆ ಮತ್ತು ಅಪೌಷ್ಟಿಕತೆ ನಿವಾರಣೆಗೆ, ಹಲವು ಇಲಾಖೆಗಳ ಕಾರ್ಯಕರ್ತರು, ಮನೆ ಮನೆಗೆ ಅಭಿಯಾನ ಆರಂಭಿಸಿದ್ದಾರೆ. ಈ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ವಿಜಯಪುರ ಜಿಲ್ಲೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ, ಕೆ.ಕೆ ಚೌವ್ಹಾಣ್.**

<><><>

**ಕೆ.ಕೆ. ಚೌವ್ಹಾಣ್ ಧ್ವನಿ 40 ಸೆಕೆಂದುಗಳು**

<><><>

ಹೆಣ್ಣು ಭ್ರೂಣ ಹತ್ಯೆ ಮತ್ತು ಭ್ರೂಣ ಲಿಂಗ ಪತ್ತೆ ಅನುಮಾನದ ಹಿನ್ನೆಲೆ, ಕೇಂದ್ರ ಆರೋಗ್ಯ ಸಚಿವಾಲಯದ ಅಧಿಕಾರಿಗಳ ತಂಡ, ಬಾಗಲಕೋಟೆ ಜಿಲ್ಲೆ ಗುಳೇದಗುಡ್ಡ, ಬಾದಾಮಿ, ಮುಧೋಳ ಮತ್ತು ಮಹಾಲಿಂಗಪುರದ ವಿವಿಧೆಡೆ ಭೇಟಿ ನೀಡಿ, ಹಲವು ಆಸ್ಪತ್ರೆಗಳು, ಸ್ಕ್ಯಾನಿಂಗ್ ಸೆಂಟರ್‌ಗಳು ಹಾಗೂ ವೈದ್ಯರ ಕ್ಲಿನಿಕ್‌ಗಳನ್ನು ಪರಿಶೀಲಿಸಿತು.

<><><>

ಲಿಂಗತ್ವ ಅಲ್ಪ ಸಂಖ್ಯಾತರಿಗೆ ಶಕ್ತಿ ಯೋಜನೆ ಮತ್ತು ಗೃಹ ಲಕ್ಷ್ಮೀ ಯೋಜನೆಯ ಸೌಲಭ್ಯ ಕಲ್ಪಿಸಲು, ಸರ್ಕಾರ ಬದ್ಧವಾಗಿದೆ; ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಚರ್ಚೆ ಬಳಿಕ, ನಿರ್ದೇಶನ ನೀಡಿದ್ದು, ಆದೇಶ ಪ್ರಕಟಿಸಲಾಗಿದೆ ಎಂದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್, ತಿಳಿಸಿದ್ದಾರೆ. ವಿಧಾನಸಭೆಯಲ್ಲಿ, ಶಾಸಕಿ ನಯನಾ ಮೋಟಮ್ಮ ಅವರ ಪ್ರಶ್ನೆಗೆ, ಸಚಿವರು ಉತ್ತರಿಸಿದರು. ರಾಜ್ಯದಲ್ಲಿ ಅಗತ್ಯವಿರುವ ಕಡೆ, ಅಂಗನವಾಡಿ ಕೇಂದ್ರಗಳನ್ನು ಆರಂಭಿಸಲು ಸರ್ಕಾರ ಸೂಕ್ತ ಕ್ರಮ ಕೈಗೊಂಡಿದೆ. ಅಂಗನವಾಡಿ ಕಾರ್ಯಕರ್ತೆಯರ ಸಂಭಾವನೆ ಹೆಚ್ಚಿಸಲು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗಿದೆ ಎಂದು, ಅವರು ಹೇಳಿದರು.

<><><>

ಈ ಮಧ್ಯೆ, ದಾವಣಗೆರೆಯ ವಿವಿಧ ಅಂಗನವಾಡಿ ಕೇಂದ್ರಗಳಿಗೆ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ ಕರೆಣ್ಣವರ ದಿಢೀರ್ ಭೇಟಿ ನೀಡಿ, ಪರಿಶೀಲಿಸಿದರು. ಗಾಳಿ, ಬೆಳಕು, ಜಾಗ, ಸ್ವಚ್ಛತೆ ಮತ್ತು ಪೌಷ್ಟಿಕ ಆಹಾರದ ಕೊರತೆ ಬಗ್ಗೆ ಅಸಮಾಧಾನ ವ್ಯಕ್ತ ಪಡಿಸಿದ ನ್ಯಾಯಾಧೀಶರು, ಇಲಾಖೆಯ ಉನ್ನತಾಧಿಕಾರಿಗಳ ಗಮನಕ್ಕೆ ತಂದು, ಕ್ರಮ ಜರುಗಿಸುವ ಎಚ್ಚರಿಕೆ ನೀಡಿದರು.

<><><>

ರಾಜ್ಯದ 17 ಲಕ್ಷ ರೈತ ಕುಟುಂಬಗಳಿಗೆ, ಜೀವನೋಪಾಯ ಪರಿಹಾರ ವಿತರಿಸಲಾಗಿದೆ. ಈ ವರೆಗೆ 4 ಸಾವಿರದ 132 ಕೋಟಿ ರೂಪಾಯಿ ಪರಿಹಾರ ಅವರ ಖಾತೆಗೆ ಜಮೆ ಮಾಡಲಾಗಿದೆ ಎಂದು, ಕಂದಾಯ ಖಾತೆ ಸಚಿವ ಕೃ ್ಣ ಬೈರೇಗೌಡ, ತಿಳಿಸಿದ್ದಾರೆ. ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ, ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸೂಕ್ತ ರೀತಿ ಸಮೀಕ್ಷೆ ಕೈಗೊಂಡು, 38 ಲಕ್ಷಕ್ಕೂ ಹೆಚ್ಚು ಅರ್ಹ ರೈತರಿಗೆ ಬರ ಪರಿಹಾರ ನೀಡಲಾಗಿದೆ. ಹಿಂದಿನ ವ ್ಗಗಳಿಗೆ ಹೋಲಿಸಿದರೆ, ಈ ಬಾರಿ ದ್ವಿಗುಣ ಪರಿಹಾರ ಪಾವತಿಸಲಾಗಿದೆ ಎಂದರು.

<><><>

ಈ ಮಧ್ಯೆ, ರೈತರ ಜಮೀನುಗಳಿಗೆ ಆಧಾರ ಜೋಡಣೆ ಮಾಡಲು, ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡರ ಸೂಚನೆಯಂತೆ, ಬಳ್ಳಾರಿ ಜಿಲ್ಲೆಯಲ್ಲಿ, ಶೇಕಡ 78 ರ ್ಟು ಪ್ರಗತಿ ಸಾಧಿಸಲಾಗಿದೆ ಎಂದು, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ತಿಳಿಸಿದ್ದಾರೆ.

<><><>

ಮುಡಾದಲ್ಲಿ ನಡೆದಿದೆ ಎನ್ನಲಾದ ಹಗರಣದ ಕುರಿತು ಚರ್ಚಿಸಲು, ನಿಲುವಳಿ ಸೂಚನೆ ಮಂಡಿಸುವ ಮೊದಲು, ವಿಷಯವನ್ನು ಪ್ರಸ್ತಾಪ ಮಾಡಿ, ಪೂರ್ವಭಾವಿಯಾಗಿ ಚರ್ಚಿಸಲು, ಪ್ರತಿಪಕ್ಷದ ನಾಯಕ ಆರ್.ಅಶೋಕ ವಿಧಾನಸಭಾಧ್ಯಕ್ಷ ಯೂ.ಟಿ. ಖಾದರ್ ಅವರಲ್ಲಿ ಕೋರಿದರು. ಆದರೆ, ಇದಕ್ಕೆ ಸಮ್ಮತಿಸದ ಸಭಾಧ್ಯಕ್ಷರು, ಪ್ರಶ್ನೋತ್ತರ ಅವಧಿಯ ನಂತರ ಚರ್ಚಿಸೋಣ ಎಂದು, ರೂಲಿಂಗ್ ನೀಡಿದರು.

<><><>

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ.ಪಾಟೀಲ ಮಾತನಾಡಿ, ಮುಡಾ ತನಿಖೆಗೆ ಈಗಾಗಲೇ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ಅವರ ನೇತೃತ್ವದಲ್ಲಿ ಏಕ ಸದಸ್ಯ ಆಯೋಗ

ರಚನೆ ಮಾಡಲಾಗಿದೆ. 6 ತಿಂಗಳೊಳಗೆ ತನಿಖೆ ಪೂರ್ಣಗೊಳಿಸಿ ವರದಿ ನೀಡುವಂತೆ ಆಯೋಗಕ್ಕೆ ಸೂಚನೆ ನೀಡಲಾಗಿದೆ. ಹಲವು ʼರತ್ತುಗಳನ್ನು ವಿಧಿಸಿದ್ದು, ಅವುಗಳನ್ವಯ ಆಯೋಗ ತನಿಖೆ ನಡೆಸಲಿದೆ ಎಂದರು.

<><><>

ಇದಕ್ಕೆ ಒಪ್ಪದ ವಿಪಕ್ಷ ನಾಯಕ ಆರ್.ಅಶೋಕ, ಮುಡಾ ಹಗರಣದ ಬಗ್ಗೆ ರಾಜ್ಯಾದ್ಯಂತ ವ್ಯಾಪಕ ಚರ್ಚೆಯಾಗುತ್ತಿದೆ. ಮುಖ್ಯಮಂತ್ರಿಗಳ ಮೇಲೆ ಆರೋಪವಿದೆ. ಈ ಬಗ್ಗೆ ಚರ್ಚೆಗೆ ಅವಕಾಶ ನೀಡಬೇಕೆಂದು ಒತ್ತಾಯಿಸಿದರು.

<><><>

ಈ ಮಧ್ಯೆ, ವಿಪಕ್ಷ ಸದಸ್ಯರು, ಕೂಡಲೇ ಮುಡಾ ವಿ ʼಯದ ಕುರಿತು, ಚರ್ಚೆ ನಡೆಸಲು ಅವಕಾಶ ನೀಡಬೇಕು ಎಂದು, ಒತ್ತಾಯಿಸಿದರು. ಬಿಜೆಪಿ ಅಹೋರಾತ್ರಿ ಧರಣಿ ಆರಂಭಿಸಿದೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಪ್ರಸಕ್ತ ಸಾಲಿನ ಕೇಂದ್ರದ ಮುಂಗಡ ಪತ್ರದಲ್ಲಿ, ಕರ್ನಾಟಕಕ್ಕೆ 7 ಸಾವಿರದ 5 ನೂರಾ 59 ಕೋಟಿ ರೂಪಾಯಿ ರೈಲು ಅಭಿವೃದ್ಧಿ ಕಾಮಗಾರಿಗೆ ಮೀಸಲಿಡಲಾಗಿದೆ ಎಂದು, ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಹೊಸ ದಿಲ್ಲಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಸಚಿವರು, ಕರ್ನಾಟಕದ 59 ರೈಲು ನಿಲ್ದಾಣಗಳನ್ನು ಅಮೃತ ನಿಲ್ದಾಣಗಳಾಗಿ ಅಭಿವೃದ್ಧಿಪಡಿಸಲಾಗುವುದು. ಕರ್ನಾಟಕದಲ್ಲಿ 47 ಸಾವಿರದ 16 ಕೋಟಿ ರೂಪಾಯಿಗಳ 31 ಯೋಜನೆಗಳಡಿ ಹೊಸ ಹಳಿ ಹಾಕುವ ಕಾಮಗಾರಿ ನಡೆಯುತ್ತಿದೆ. ಕರ್ನಾಟಕದಲ್ಲಿ ಕಳೆದ ಹತ್ತು ವರ್ಷಗಳಲ್ಲಿ, ಒಟ್ಟು 638 ರೈಲ್ವೆ ಮೇಲ್ಸೇತುವೆಗಳು ಮತ್ತು ಕೆಳ ಸೇತುವೆಗಳನ್ನು ನಿರ್ಮಿಸಲಾಗಿದೆ ಎಂದು, ಅವರು ಹೇಳಿದರು.

<><><>

ಕಾಫಿಯನ್ನು ವಾಣಿಜ್ಯೋದ್ಯಮದಿಂದ, ಕೃಷಿ ವ್ಯಾಪ್ತಿಗೆ ತರುವ ಚಿಂತನೆ ನಡೆದಿದೆ ಎಂದು, ಭಾರತೀಯ ಕಾಫಿ ಮಂಡಳಿ ಅಧ್ಯಕ್ಷ ದಿನೇಶ್ ಎಂ.ಜೆ. ತಿಳಿಸಿದ್ದಾರೆ. ಚಿಕ್ಕಮಗಳೂರು ಕಾಫಿ ಮಂಡಳಿಯಲ್ಲಿ ನಡೆದ ಸಭೆಯಲ್ಲಿ ಅವರು ಈ ವಿಷಯ ತಿಳಿಸಿದರು. 2027ರ ವೇಳೆಗೆ, ಕಾಫಿಯ ಚಿತ್ರಣ ಹೇಗಿರಬೇಕು ಎಂಬ, 17 ಅಂಶಗಳ ಕ್ರಿಯಾ ಯೋಜನೆ ಸಿದ್ಧ ಪಡಿಸಲಾಗುತ್ತಿದೆ. ಪ್ರಸ್ತುತ ಭಾರತದಲ್ಲಿ ಮೂರೂವರೆ ಲಕ್ಷ ಮೆಟ್ರಿಕ್ ಟನ್ ಕಾಫಿ ಉತ್ಪಾದನೆಯಾಗುತ್ತಿದೆ. 2047 ರ ವೇಳೆಗೆ ಭಾರತದಲ್ಲಿ, 9 ಲಕ್ಷ ಮೆಟ್ರಿಕ್ ಟನ್ ಕಾಫಿ ಉತ್ಪಾದಿಸುವ ಗುರಿ ಹೊಂದಲಾಗಿದೆ ಎಂದರು.

<><><>

ಬೆಳಗಾವಿ ಜಿಲ್ಲೆಯಾದ್ಯಂತ, ನಿರಂತರ ಮಳೆಯಾಗುತ್ತಿದ್ದು ಜನ ಜೀವನ ಅಸ್ತವ್ಯಸ್ತಗೊಂಡಿದೆ. ಪಶ್ಚಿಮ ಘಟ್ಟದಲ್ಲಿ ಭಾರೀ ಮಳೆ ಹಿನ್ನೆಲೆ, ಜಿಲ್ಲೆಯ ಕೃಷ್ಣ, ದೂಧ ಗಂಗಾ, ವೇದ ಗಂಗಾ, ಪಂಚ ಗಂಗಾ, ಮಲಪ್ರಭಾ, ಘಟಪ್ರಭಾ, ಮಾರ್ಕಂಡೇಯ ನದಿಗಳಿಗೆ ಭಾರೀ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ. ಬೆಳಗಾವಿ ಜಿಲ್ಲೆಯಲ್ಲಿ ಈಗಾಗಲೇ 25 ಸೇತುವೆಗಳು ಜಲಾವೃತಗೊಂಡು ಸಂಪರ್ಕಕ್ಕೆ ತೊಂದರೆಯುಂಟಾಗಿದೆ. 427 ಕಾಳಜಿ ಕೇಂದ್ರಗಳಿಗೆ ಎಲ್ಲ ತಹಶೀಲ್ದಾರರು ಭೇಟಿ ನೀಡಿ, ಸಿದ್ಧತೆ ಕೈಗೊಳ್ಳುವಂತೆ ಸೂಚಿಸಲಾಗಿದೆ.

<><><>

ಬೆಳಗಾವಿ, ಬೈಲಹೊಂಗಲ, ಖಾನಾಪುರ, ಕಿತ್ತೂರು, ಚಿಕ್ಕೋಡಿ, ನಿಪ್ಪಾಣಿ ತಾಲೂಕಿನ ಶಾಲೆಗಳಿಗೆ, ಚಿಕ್ಕೋಡಿ ಮತ್ತು ನಿಪ್ಪಾಣಿ ತಾಲೂಕುಗಳನ್ನು ಹೊರತು ಪಡಿಸಿ, ಪಿ.ಯೂ. ಕಾಲೇಜುಗಳಿಗೆ, ಇಂದು ಮತ್ತು ನಾಳೆ ರಜೆ ಘೋಷಿಸಲಾಗಿದೆ.

<><><>

ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋ ’ನ್ ಪ್ರದೇಶ ಸಮಾಚಾರಕ್ಕಾಗಿ, ಹೆಚ್ಚಿನ ಮಾಹಿತಿ ನೀಡಿದ್ದಾರೆ.

<><><>

ಜಿಲ್ಲಾಧಿಕಾರಿ ಮೊಹಮ್ಮದ್ ರೋ ’ನ್ ಧ್ವನಿ 38 ಸೆಕೆಂದುಗಳು

<><><>

ಹಾಸನ ಜಿಲ್ಲೆ, ಸಕಲೇಶಪುರದಲ್ಲಿ ಮಳೆ ಹೆಚ್ಚಾದ ಹಿನ್ನೆಲೆ, ತಾಲೂಕಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಇಂದು ರಜೆ ಘೋಷಿಸಲಾಗಿದೆ.

<><><>

ಸತತ ಮಳೆ ಹಿನ್ನೆಲೆ, ಧಾರವಾಡ ಜಿಲ್ಲೆಯ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ, ಇಂದು ಮತ್ತು ನಾಳೆ ರಜೆ ಘೋಷಿಸಲಾಗಿದೆ.

<><><>

ದಾವಣಗೆರೆ ಜಿಲ್ಲೆ, ತುಂಗಭದ್ರಾ ನದಿ ಪಾತ್ರದ, ಹೊನ್ನಾಳಿ ಮತ್ತು ಹರಿಹರದ 43 ಕುಟುಂಬಗಳನ್ನು, ತಾತ್ಕಾಲಿಕ ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಲಾಗುತ್ತಿದೆ ಎಂದು, ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ತಿಳಿಸಿದ್ದಾರೆ.

<><><>

ಹಾವೇರಿ ಜಿಲ್ಲೆಯಾದ್ಯಂತ, ಸತತ ಮಳೆಗೆ, 526 ಮನೆಗಳಿಗೆ ಹಾನಿಯಾಗಿದೆ. 992 ಹೆಕ್ಟರ್ ಬೆಳೆ ಜಲಾವೃತವಾಗಿ, 12 ಸೇತುವೆಗಳು ಮುಳುಗಡೆಯಾಗಿವೆ. 110 ಗ್ರಾಮಗಳಲ್ಲಿ ಕಾಳಜಿ ಕೇಂದ್ರ ತೆರೆಯಲು ಜಿಲ್ಲಾಡಳಿತ ಸನ್ನದ್ಧವಾಗಿದೆ ಎಂದು, ಜಿಲ್ಲಾಧಿಕಾರಿ ವಿಜಯ ಮಹಾಂತೇಶ ತಿಳಿಸಿದ್ದಾರೆ.

<><><>

ಉತ್ತರಕನ್ನಡ ಜಿಲ್ಲೆ, ಅಂಕೋಲಾದ ಶಿರೂರು ಗುಡ್ಡ ಕುಸಿತ ದುರಂತದ ಶೋಧ ಕಾರ್ಯ ಹಾಗೂ ತೆರವು ಕಾರ್ಯಾಚರಣೆ, ಮುಂದುವರಿದಿದೆ. ಸೇನಾಪಡೆ ತಂಡ ಜಿ.ಪಿ.ಆರ್ ಮೂಲಕ ಶೋಧ ಕೈಗೊಂಡಿದೆ. ಸೀ ಬರ್ಡ್ ನೌಕಾ ನೆಲೆ ಮುಳುಗು ತಜ್ಞರು, ಸ್ಕೂಬಾ ಡೈವಿಂಗ್ ಮೂಲಕ ಹುಡುಕಾಟ ನಡೆಸಿದ್ದಾರೆ. ರಾಜ್ಯ ಹಾಗೂ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಗಳು, ದೋಣಿ ಬಳಸಿ ಗಂಗಾವಳಿ ನದಿಯಲ್ಲಿ ಪತ್ತೆ ಕಾರ್ಯ ಮುಂದುವರೆಸಿವೆ. ಶಿರೂರಿನಲ್ಲಿ ಗುಡ್ಡ ಕುಸಿಯುವ ಸಾಧ್ಯತೆ ಇದೆ ಎಂದು, ಭಾರತೀಯ ಭೂ ಗರ್ಭ ಸಮೀಕ್ಷೆ ತಜ್ಞರು ಎಚ್ಚರಿಸಿದ್ದಾರೆ. ಈ ಹೆದ್ದಾರಿ ಇನ್ನೂ ಸಂಚಾರಕ್ಕೆ ಮುಕ್ತವಾಗಿಲ್ಲ. ಹೆದ್ದಾರಿ ಪಕ್ಕದ ಮಣ್ಣಿನ ರಾಶಿಯನ್ನು ಸಮತಟ್ಟುಗೊಳಿಸುವ ಕಾರ್ಯ ನಡೆಯುತ್ತಿದೆ. ದುರಂತದಲ್ಲಿ ಕಣ್ಮರೆಯಾದ 10 ಜನರಲ್ಲಿ ಈ ವರೆಗೆ 8 ಜನರ ಶವಗಳು ಪತ್ತೆಯಾಗಿವೆ.

<><><>

ಆಕಾಶವಾಣಿ ಭದ್ರಾವತಿ ಕೇಂದ್ರದ, ವಜ್ರ ಮಹೋತ್ಸವ ಸಂಭ್ರಮಾಚರಣೆ ಹಿನ್ನೆಲೆ, ಯುವ ಜನತೆಯ ಪ್ರತಿಭಾ ಪ್ರದರ್ಶನಕ್ಕಾಗಿ ರೂಪಿತ ವೇದಿಕೆ, ‘ಕ್ಯಾಂಪಸ್ ಕಟ್ಟೆ’ಯ 50ನೇ ಕಾರ್ಯಕ್ರಮ, ಇಂದು ಬೆಳಗ್ಗೆ 10 ರಿಂದ 11 ಗಂಟೆಯ ವರೆಗೆ ನೇರ ಪ್ರಸಾರವಾಗಲಿದೆ. ಶಿವಮೊಗ್ಗ, ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಯ ವಿವಿಧ ಕಾಲೇಜಿನ 400ಕ್ಕೂ ಹೆಚ್ಚು ವಿದ್ಯಾರ್ಥಿಗಳು, ಭಾಗವಹಿಸಿ, ಕಾರ್ಯಕ್ರಮ ರೂಪಿಸುತ್ತ ಬಂದಿದ್ದಾರೆ ಎಂದು, ಭದ್ರಾವತಿ ಆಕಾಶವಾಣಿ ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥ ಎಸ್.ಆರ್.ಭಟ್ ತಿಳಿಸಿದ್ದಾರೆ.

<><><>

ಉಡುಪಿಯ ರಾಷ್ಟ್ರಕವಿ ಗೋವಿಂದ ಪೈ ಸಂಶೋಧನಾ ಕೇಂದ್ರ, ಮಣಿಪಾಲ ಅಕಾದೆಮಿ ಆಫ್ ಹೈಯರ್ ಅಜ್ಯುಕೇಶನ್ – ಮಾಹೆ ಆಶ್ರಯದಲ್ಲಿ, ಸೇಡಿಯಾಪು ಪ್ರಶಸ್ತಿಯನ್ನು ಹಿರಿಯ ಸಾಹಿತಿ ಹಾಗೂ ಸಂಶೋಧಕ ಡಾಕ್ಟರ್ ಬಿ.ವಿ. ಶಿರೂರ ಅವರಿಗೆ, ಹುಬ್ಬಳ್ಳಿಯ ಅವರ ನಿವಾಸದಲ್ಲಿ ಪ್ರದಾನ ಮಾಡಲಾಯಿತು. ಡಾಕ್ಟರ್ ಪಾದೇಕಲ್ಲು ವಿಷ್ಣು ಭಟ್ ಮಾತನಾಡಿ, ನಾಡಿನ ಸಾಕ್ಷಿ ಪ್ರಜ್ಞೆ, ಸಂಶೋಧನಾ ಕ್ಷೇತ್ರದಲ್ಲಿ ಗಣನೀಯ ಕೊಡುಗೆ ನೀಡಿದ, ಡಾಕ್ಟರ್ ಬಿ.ವಿ. ಶಿರೂರ ಅವರಿಗೆ, ಗೋವಿಂದ ಪೈ ಹಾಗೂ ಸೇಡಿಯಾಪು ಕೃಷ್ಣ ಭಟ್ಟರ ಹೆಸರಿನ ಪ್ರಶಸ್ತಿ ನೀಡುತ್ತಿರುವುದು, ಹೆಮ್ಮೆಯ ಸಂಗತಿ ಎಂದರು.

<><><>

ಕೃಷಿಕರ ಪಾಲಿಗೆ ಜ್ಞಾನದ ಬುತ್ತಿಯಾದ, ಕೃಷಿ ಮೇಳವನ್ನು, ಧಾರವಾಡ ಕೃಷಿ ವಿಶ್ವವಿದ್ಯಾಲಯ, ಸೆಪ್ಟೆಂಬರ್ 21 ರಿಂದ 24ರ ವರೆಗೆ, ನಾಲ್ಕು ದಿನಗಳ ಕಾಲ ಏರ್ಪಡಿಸಲಿದೆ ಎಂದು, ವಿಸ್ತರಣಾ ನಿರ್ದೇಶಕರು ತಿಳಿಸಿದ್ದಾರೆ. ಈ ವರ್ಷದ ರೈತ ಜಾತ್ರೆಯನ್ನು "ಹವಾಮಾನ ವೈಪರೀತ್ಯ ನಿರ್ವಹಣೆಗೆ, ಕೃಷಿ ತಾಂತ್ರಿಕತೆಗಳು" ಎಂಬ ಘೋಷ ವಾಕ್ಯದಡಿ, ಆಯೋಜಿಸಲು ಕೃಷಿ ವಿಶ್ವವಿದ್ಯಾಲಯ ಧಾರವಾಡ ಉತ್ಸುಕವಾಗಿದೆ ಎಂದಿದ್ದಾರೆ.

<><><>

ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ, 135ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ, ಇಂದು ಬೆಳಗ್ಗೆ 11 ಗಂಟೆಗೆ, ಆರ್ಟ್ ಗ್ಯಾಲರಿ ಉದ್ಘಾಟನೆ ಹಾಗೂ ಚಿತ್ರಕಲಾ ಪ್ರದರ್ಶನ ಏರ್ಪಡಿಸಿದೆ. ಬೆಂಗಳೂರಿನ ಕರ್ನಾಟಕ ಲಲಿತಕಲಾ ಅಕಾದೆಮಿ ಅಧ್ಯಕ್ಷ ಪ.ಸ. ಕುಮಾರ, ಉದ್ಘಾಟಿಸಲಿದ್ದಾರೆ. ಧಾರವಾಡದ ಹಿರಿಯ ಕಲಾವಿದ ಎಂ.ಆರ್.ಬಾಳಿಕಾಯಿ, ಗದಗ ವಿಜಯ ಕಾಲೇಜ್ ಆಫ್ ಫೈನ್‌ಆರ್ಟ್‌ನ ಸಂಸ್ಥಾಪಕ ಅಶೋಕ ಅಕ್ಕಿ, ಕಲಾವಿದರಾದ ಬಿ.ಮಾರುತಿ ರೇಣುಕಾ ಮಾರ್ಕಂಡೆ ಪಾಲ್ಗೊಳ್ಳಲಿದ್ದಾರೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಸಂಪೂರ್ಣತಾ ಆಂದೋಲನ: ವಿಜಯಪುರ ಜಿಲ್ಲೆ ತಾಳಿಕೋಟೆಯಲ್ಲಿ, ಆರೋಗ್ಯ ಅಭಿಯಾನಕ್ಕೆ, ಚಾಲನೆ.
- ಕೇಂದ್ರದ ಅಮೃತ ಯೋಜನೆ; ಕರ್ನಾಟಕದ 59 ರೈಲು ನಿಲ್ದಾಣಗಳು, ಮೇಲ್ದರ್ಜೆಗೆ – ಅಶ್ವಿನಿ ವೈಷ್ಣವ್.
- ಕಾಫಿ; ವಾಣಿಜ್ಯೋದ್ಯಮದಿಂದ, ಕೃಷಿ ವ್ಯಾಪ್ತಿಗೆ ತರಲು ಚಿಂತನೆ – ದಿನೇಶ್ ಎಂ.ಜೆ.
- ಮುಂದುವರೆದ ಮಳೆ; ಮೈದುಂಬಿದ ನದಿಗಳು, ಸನ್ನದ್ಧ ಸ್ಥಿತಿಯಲ್ಲಿ ಕಾಳಜಿ ಕೇಂದ್ರಗಳು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>

ಹರ್ಷ